ಮಂಡಳಿಯ ಅಧ್ಯಕ್ಷರು ಆಡಳಿತಾತ್ಮಕ ಮುಖ್ಯಸ್ಥರಾಗಿರುತ್ತಾರೆ. ಸದಸ್ಯ ಕಾರ್ಯದರ್ಶಿಗಳು ಅವರ ಅಧೀನದಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳಾಗಿರುತ್ತಾರೆ. ಸರ್ಕಾರದ ಯಾವುದೇ ನಿರ್ದೇಶನ ಅಥವಾ ಆದೇಶಗಳನ್ನು ಸದಸ್ಯ ಕಾರ್ಯದರ್ಶಿಗಳು ಉಲ್ಲಂಘಿಸಿರುವುದಿಲ್ಲ.

ಊ) ಸದಸ್ಯ ಕಾರ್ಯದರ್ಶಿಗಳು ಸರ್ಕಾರದ ಯಾವುದೇ ನಿರ್ದೇಶನ ಅಥವಾ ಆದೇಶಗಳನ್ನು ಉಲ್ಲಂಘಿಸಿರುವುದಿಲ್ಲವಾದ್ದರಿಂದ ಶಿಸ್ತುಕ್ರಮ ಜರುಗಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

**ಪ್ರವಾಸಿ ಮಂದಿರದ ಮೇಲಂತಸ್ತು ಕಟ್ಟಡ ನಿರ್ಮಿಸುವುದು**

**1048 (1387) ಶ್ರೀ ಶ್ರೀನಿವಾಸ್ (ವಾಸು) ಎಸ್.ಆರ್. (ಗುಬ್ಬಿ) :** ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಬ್ಬಿ ತಾಲ್ಲೂಕು ಕೇಂದ್ರದಲ್ಲಿ ಪ್ರವಾಸಿ ಮಂದಿರದಲ್ಲಿ ಮೇಲಂತಸ್ತು ಕಟ್ಟಡ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಸಾಲಿನಲ್ಲಿ ಪ್ರವಾಸಿ ಮಂದಿರದ ಮೇಲಂತಸ್ತು ಕಟ್ಟಡ ನಿರ್ಮಾಣ ಕಾಮಗಾರಿಗೆ ಮಂಜೂರಾತಿ ನೀಡಿ ಚಾಲನೆ ನೀಡಲಾಗುವುದೇ?

ಇ) ಪ್ರವಾಸಿ ಮಂದಿರದ ಮೇಲಂತಸ್ತಿನ ಕಟ್ಟಡಕ್ಕೆ ಸರ್ಕಾರ ಕೂಡಲೇ ಅನುದಾನವನ್ನು ಬಿಡುಗಡೆ ಮಾಡುವುದೇ;

ಈ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಮತ್ತು ಯಾವಾಗ ಬಿಡುಗಡೆ ಮಾಡಲಾಗುವುದು?

**ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :**

ಅ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.